**<u>ದಿನಾಂಕಃ 21-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.</u>**

**<u>ಪಾಟೀ ಸವಾಲು ವಾದಿ ಪರ ಶ್ರೀ.ಪಿ ಎಲ್ ಎನ್ ವಕೀಲರಿಂದಃ-</u>**

ವಾದಿ ಪುಟ್ಟಸ್ವಾಮಿ ನನಗೆ ಗೊತ್ತು. ದಾವಾ ಆಸ್ತಿಯು ವಾದಿಗೆ ಸೇರಿದಂತಹ ಆಸ್ತಿ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು ವಾದಿಯು ತಿಪ್ಪೇಗೌಡ ಬಿನ್ ಗುಬ್ಬೇಗೌಡರವರಿಂದ ದಿ 22.04.2010 ರಂದು ನೊಂದಾಯಿತ ಖರೀದಿ ಪತ್ರದಿಂದ ಖರೀದಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ವಾದಿಯು ಖರೀದಿ ಮಾಡಿರುವ ದಾವಾ ಸ್ವತ್ತಿನಲ್ಲಿ ಸ್ವಾಧೀನ ಇದ್ದು ಅವರ ಸ್ವಾಧೀನಕ್ಕೆ ನಾನು ಅಡ್ಡಿಪಡಿಸುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ವಾದಿಗೆ ನಾನು ಮತ್ತು ಇನ್ನಿತರ ಪ್ರತಿವಾದಿಗಳು ತೊಂದರೆ ಕೊಡುತ್ತಿದ್ದರಿಂದ ನನ್ನ ಮತ್ತು ಇನ್ನುಳಿದ ಪ್ರತಿವಾದಿಗಳ ವಿರುದ್ದ ಅಕ್ಕೂರು ಪೊಲೀಸ್ ಠಾಣೆಯಲ್ಲಿ ಪಿರ್ಯಾದು ದಾಖಲು ಮಾಡಿದ್ದಾರೆ ಎಂದರೆ ಸಾಕ್ಷಿ ನಾನೇ ವಾದಿಯ ವಿರುದ್ದ ಪಿರ್ಯಾದು ದಾಖಲು ಮಾಡಿದ್ದೇನೆ ಎನ್ನುತ್ತಾರೆ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಯಾವುದೇ ಹಕ್ಕು ಹಿತಾಸಕ್ತಿ ಇಲ್ಲದಿದ್ದರು ಸದರಿ ಆಸ್ತಿಯನ್ನು ಲಪಾಟಾಯಿಸುವ ಉದ್ದೇಶದಿಂದ ವಾದಿಯ ಸ್ವಾಧೀನಕ್ಕೆ ಅಡ್ಡಿಪಡಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ
ನ್ಯಾಯಾಲಯ, ಚನ್ನಪಟ್ಟಣ